(ಇಂದು ದಿನಾಂಕ:22-01-2026 ರಂದು ಸಾಕ್ಷಿದಾರರನ್ನು ಕರೆಯಿಸಲಾಯಿತು, ಪ್ರಮಾಣ ವಚನ ಬೋಧಿಸಲಾಯಿತು)

**ಮುಖ್ಯ ವಿಚಾರಣೆ: ಎದುರುದಾರರ ನಂ.3 ರವರ ಪರ ವಕೀಲರಿಂದ :-**

ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿದ್ದೇನೆ. ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ.

ನಾನು ದಾಖಲೆಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಈಗ ನೋಡುತ್ತಿದ್ದೇನೆ. ಸಾಕ್ಷಿಯು ಕೆಳಕಂಡ ದಾಖಲಾತಿಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಈ ಕೆಳಕಂಡಂತೆ ನಿಶಾನೆಯಾಗಿ ಗುರುತಿಸಲಾಯಿತು.

| | |
|---|---|
| ನಿ.ಆರ್.1 | ಅಧಿಕಾರ ಪತ್ರ |
| ನಿ.ಆರ್.2 | ವಿಮಾ ಪಾಲಿಸಿ |

**ಪಾಟೀ ಸವಾಲು: ಅರ್ಜಿದಾರ ಪರ ಶ್ರೀ ಎಸ್ ಬಿ ವಕೀಲರಿಂದ**

1. ಅಪಘಾತದ ದಿನ ಲಾರಿ ಸಂಖ್ಯೆ ಎಪಿ 39 ಟಿ ಎ 3489 ನೇದ್ದಕ್ಕೆ ವಿಮೆ ಚಾಲ್ತಿಯಲ್ಲಿತ್ತು ಎಂದರೆ ಸರಿ. ಎದುರುದಾರ ನಂ.1 ಇವರಿಗೆ ವಾಹನ ಚಾಲನಾ ಪರವಾನಿಗೆ ಇತ್ತು ಎಂದರೆ ಸರಿಯಲ್ಲ. ಅಪಘಾತದ ದಿನ ಲಾರಿಗೆ ಫಿಟನೆಸ್ ಮತ್ತು ಪರ್ಮಿಟ್ ಇತ್ತು ಎಂದರೆ ಸರಿಯಲ್ಲ. ಪೋಲೀಸರು ಎದುರುದಾರ ನಂ.1 ಇವರ ವಿರುದ್ದ ಅಂತಿಮ ವರದಿ ಸಲ್ಲಿಸಿರುತ್ತಾರೆ ಎಂದರೆ ಸರಿ. ಅಂತಿಮ ವರದಿಯಲ್ಲಿ ಎದುರುದಾರ ನಂ.1 ಇವರ ಅಲಕ್ಷತನದಿಂದ ಅಪಘಾತವಾಗಿದೆ ಎಂದು ಬರೆದಿದೆ ಎಂದರೆ ಸರಿ. ಅಂಗನ್ಯೂನ್ಯತೆ ಪ್ರಮಾಣ ಪತ್ರದಲ್ಲಿ ಅಂಗನ್ಯೂನ್ಯತೆ ಶೇಕಡಾವಾರು ಸರಿಯಾಗಿ ತೋರಿಸಿರುತ್ತಾರೆ ಎಂದರೆ ಸರಿಯಲ್ಲ. ಪರಿಹಾರ ಕೊಡಬೇಕಾಗುತ್ತದೆ ಎಂದು ನ್ಯಾಯಾಲಯದ ಮುಂದೆ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯನ್ನು ವಿಚಾರಿಸಿ ನಂತರ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ. ಸರಿ ಇದೆ,

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು,
ಸಿಂಧನೂರು.